ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

---

**ಸಂಖ್ಯೆ : ಎಡಿಎಂ2(1):ಶೈ.ಮಾ-01:2022-23** **ದಿನಾಂಕ : 19.05.2022**

-: ಸುತ್ತೋಲೆ :-

ವಿಷಯ : ರಾಜ್ಯದ ಬಹುತೇಕ ಭಾಗಗಳಲ್ಲಿ ತೀವ್ರ ಮಳೆಯಾಗುತ್ತಿರುವುದರಿಂದ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕುರಿತು.

ಉಲ್ಲೇಖ : 1) ಈ ಕಛೇರಿಯ ಸುತ್ತೋಲೆ ಸಂಖ್ಯೆ : ಸಿ4(6):ಶೈ.ವ.ಪ್ರಾ-01:2022-23, ದಿನಾಂಕ : 20.04.2022.
2) ಈ ಕಛೇರಿಯ ಸುತ್ತೋಲೆ ಸಂಖ್ಯೆ : ಯೋ7/ಶಿ.ಶಾ.ಕ.ತೆ/01/2021-22, ದಿನಾಂಕ : 19.11.2021.

- - -

ರಾಜ್ಯಾದ್ಯಂತ ದಿನಾಂಕ : 16.05.2022 ರಿಂದ ಉಲ್ಲೇಖ (1) ರಂತೆ 2022-23ನೇ ಶೈಕ್ಷಣಿಕ ವರ್ಷದಲ್ಲಿ ಶಾಲೆಗಳು ಪ್ರಾರಂಭವಾಗಿರುತ್ತದೆ. ಆದರೆ, ರಾಜ್ಯದ ಬಹುತೇಕ ಕಡೆಗಳಲ್ಲಿ ತೀವ್ರವಾಗಿ ಮಳೆಯುಂಟಾಗುತ್ತಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಕೆಳಕಂಡ ಮುನ್ನೆಚ್ಚರಿಕಾ ಕ್ರಮಗಳನ್ನು ತೆಗೆದುಕೊಳ್ಳಲು ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಶೈಕ್ಷಣಿಕ ಉಸ್ತುವಾರಿ ಅಧಿಕಾರಿ / ಸಿಬ್ಬಂದಿಗಳಿಗೆ ಈ ಮೂಲಕ ಸೂಚಿಸಿದೆ :

1) ತೀವ್ರ ಮಳೆಯಿಂದಾಗಿ ಶಿಥಿಲಾವಸ್ಥೆಯಲ್ಲಿರುವ ಕೆಲವು ಶಾಲಾ ಕಟ್ಟಡಗಳು ಯಾವುದೇ ಸಂದರ್ಭದಲ್ಲಿ ಹಾನಿಗೊಳಗಾಗುವ / ಬಿದ್ದು ಹೋಗುವ ಸಂಭವವಿರುತ್ತದೆ. ಪ್ರಯುಕ್ತ, ಅಂತಹ ಶಾಲಾ ಕಟ್ಟಡಗಳನ್ನು / ತರಗತಿಯ ಕೊಠಡಿ / ಶೌಚಾಲಯಗಳನ್ನು ಬಳಸದೇ, ಸಮೀಪದ ಸುಸ್ಥಿತಿಯಲ್ಲಿರುವ ಕಟ್ಟಡ / ಕೊಠಡಿಗಳನ್ನು / ಶೌಚಾಲಯಗಳನ್ನು ಗುರುತಿಸಿ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವುದು ಹಾಗೂ ಮಕ್ಕಳು ಇಂತಹ ಕಟ್ಟಡ, ಕೊಠಡಿಗಳ ಮತ್ತು ಶೌಚಾಲಯಗಳ ಸಮೀಪದಲ್ಲಿ ಸುತ್ತಾಡದಂತೆ ಎಚ್ಚರಿಕೆ ಕ್ರಮ ವಹಿಸುವುದು. ಶಿಥಿಲಾವಸ್ಥೆಯಲ್ಲಿರುವ ಇಂತಹ ಕಟ್ಟಡಗಳ ತೀವ್ರತೆಯನ್ನು ಪರಿಗಣಿಸಿ ತೆರವುಗೊಳಿಸಲು ಅಥವಾ ನೆಲಸಮಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

2) ಮಳೆಯಿಂದಾಗಿ ಮಕ್ಕಳಿಗೆ ಕೆಮ್ಮು, ನೆಗಡಿ, ಜ್ವರ ಹಾಗೂ ಇನ್ನಿತರೆ ಲಕ್ಷಣಗಳು ಕಂಡು ಬಂದಲ್ಲಿ ಕೋವಿಡ್-19ರ ಸಾಂಕ್ರಾಮಿಕ ಹಿನ್ನೆಲೆಯಲ್ಲಿ ಸೂಚಿಸಿರುವ ಪ್ರಮಾಣಿತ ಕಾರ್ಯಾಚರಣಾ ವಿಧಾನ (Standard Operating Procedure) ಯಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

3) ಕೆಲವೆಡೆ ತೀವ್ರ ಮಳೆಯಿಂದಾಗಿ ಪ್ರವಾಹ ಅಥವಾ ನೆರೆ ಬಂದು ವಿದ್ಯಾರ್ಥಿಗಳು ಶಾಲೆಗಳಿಗೆ ಬಂದು ಹೋಗಲು ತೊಂದರೆಯುಂಟಾಗುವ ಅಥವಾ ಕೆಲವು ಸಂದರ್ಭಗಳಲ್ಲಿ ಮಳೆಯಿಂದಾಗಿ ಶಾಲೆಗಳ ಕೊಠಡಿಗಳಲ್ಲಿ / ಆವರಣದೊಳಗೆ ನೀರು ಸಂಗ್ರಹವಾಗುವ ಸಂಭವವಿರುತ್ತದೆ. ಇಂತಹ

ಸಂದರ್ಭಗಳಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ / ಪುರ ಸಭೆ / ನಗರ ಸಭೆ / ಮಹಾನಗರ ಪಾಲಿಕೆಗಳ (ಸ್ಥಳೀಯ ಸಂಸ್ಥೆಗಳ) ಸಹಕಾರದಿಂದ ಶಾಲಾ ಕಟ್ಟಡದಲ್ಲಿ ಸಂಗ್ರಹವಾಗಿರುವ ನೀರನ್ನು ತೆರವುಗೊಳಿಸುವುದು ಹಾಗೂ ಅಗತ್ಯಾನುಸಾರ / ಸಂದರ್ಭಾನುಸಾರ ಶಾಲಾ ಮುಖ್ಯೋಪಾಧ್ಯಾಯರು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಜಿಲ್ಲಾ ಉಪನಿರ್ದೇಶರುಗಳ ಪೂರ್ವಾನುಮತಿ ಪಡೆದು ಶಾಲೆಗಳಿಗೆ ರಜೆಯನ್ನು ಘೋಷಿಸುವುದು. ಅಂತಹ ರಜಾ ದಿನಗಳಲ್ಲಿನ ಪಾಠ-ಪ್ರವಚನಗಳನ್ನು ಮುಂದಿನ ಸರ್ಕಾರಿ ರಜಾ ದಿನಗಳಲ್ಲಿ ಸರಿದೂಗಿಸುವಂತೆ ಸೂಚಿಸಿದೆ.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಉಲ್ಲೇಖ (2) ರ ಸುತ್ತೋಲೆಯಲ್ಲಿ ಈ ಸಂಬಂಧ ಈಗಾಗಲೇ ತಿಳಿಸಿರುವ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಅಗತ್ಯವಿದ್ದಲ್ಲಿ ಸ್ಥಳೀಯ ಆರೋಗ್ಯ ಇಲಾಖೆ, ಸ್ಥಳೀಯ ಸಂಸ್ಥೆಗಳ ಮತ್ತು ತಾಲ್ಲೂಕು/ಜಿಲ್ಲಾಡಳಿತಗಳ ಸಹಕಾರದೊಂದಿಗೆ ಅಗತ್ಯ ಕ್ರಮಗಳನ್ನು ಸಕಾಲದಲ್ಲಿ ಕೈಗೊಳ್ಳುವುದು. ಮಳೆಯಿಂದ ಯಾವುದೇ ವಿದ್ಯಾರ್ಥಿ / ವಿದ್ಯಾರ್ಥಿಗಳಿಗೆ ಶಾಲೆಯಲ್ಲಿ / ಶಾಲೆಯ ಆವರಣದಲ್ಲಿ / ಶಾಲೆಯ ಸುತ್ತ-ಮುತ್ತ ಯಾವುದೇ ರೀತಿಯ ತೊಂದರೆ ಅಥವಾ ಜೀವ ಹಾನಿ ಆಗದಂತೆ ಅಗತ್ಯ ಮುನ್ನೆಚ್ಚರಿಕಾ ಹಾಗೂ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಶಾಲೆಗಳನ್ನು ನಡೆಸಿಕೊಂಡು ಹೋಗುವಂತೆ ಈ ಮೂಲಕ ಸೂಚಿಸಿದೆ.

R. 19/05/2022
ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) / (ಶೈಕ್ಷಣಿಕ), ಸಾರ್ವಜನಿಕ ಶಿಕ್ಷಣ ಇಲಾಖೆ.
2. ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಜಿಲ್ಲಾ ಉಪನಿರ್ದೇಶಕರುಗಳ ಮುಖಾಂತರ)
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).

ಪ್ರತಿಯನ್ನು :

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು.
2) ಪ್ರಾಥಮಿಕ, ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಸದರಿ ವಿಷಯವನ್ನು ಮಾನ್ಯ ಶಿಕ್ಷಣ ಸಚಿವರ ಅವಗಾಹನೆಗೆ ತರಲು ಕೋರಿದೆ.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ – ಕರ್ನಾಟಕ, ಬೆಂಗಳೂರು
4) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
5) ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲ್ಬುರ್ಗಿ / ಧಾರವಾಡ ವಿಭಾಗ
7) ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
8) ವಿಭಾಗೀಯ ಜಂಟಿ ನಿರ್ದೇಶಕರುಗಳಿಗೆ
9) ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
10) ಸಹ ನಿರ್ದೇಶಕರು, ಶಾಲಾ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು.
11) ಉಪನಿರ್ದೇಶಕರು, ಎಸ್.ಡಬ್ಲ್ಯೂ.ಎಫ್ & ಟಿ.ಬಿ.ಎಫ್., ಕೆ.ಜಿ. ರಸ್ತೆ, ಬೆಂಗಳೂರು.
12) ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

---

ಸಂಖ್ಯೆ: ಯೋ7/ಶಿ.ಶಾ.ಕ.ತೆ/01/2021-2022 ದಿನಾಂಕ: 19-11-2021

-:ಸುತ್ತೋಲೆ:-

ವಿಷಯ: ಶಿಥಿಲವಾಗಿರುವ ಮತ್ತು ಅಪಾಯದ ಸ್ಥಿತಿಯಲ್ಲಿರುವ ಶಾಲಾ ಕಟ್ಟಡಗಳನ್ನು / ಕೊಠಡಿಗಳನ್ನು ಬಳಸದಂತೆ / ಅವುಗಳಿಂದ ಅಪಾಯವಾಗದಂತೆ ಮುನ್ನೆಚ್ಚರಿಕೆ ಕೈಗೊಳ್ಳುವ ಕುರಿತು.

ಉಲ್ಲೇಖ: ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಮತ್ತುಸಕಾಲ ಇವರ ಆಪ್ತ ಕಾರ್ಯದರ್ಶಿಗಳು ಇವರ ಟಿಪ್ಪಣಿ ಸಂಖ್ಯೆP.S.E.S.M/P.S/1591/2021-22 ದಿನಾಂಕ 19-11-2021.

********

ವಿಷಯಕ್ಕೆ ಸಂಬಂಧಿಸಿದಂತೆ, ಕಳೆದ ಕೆಲವು ದಿನಗಳಿಂದ ರಾಜ್ಯದಲ್ಲಿ ನಿರಂತರವಾಗಿ ಮತ್ತು ವ್ಯಾಪಕವಾಗಿ ಮಳೆ ಸುರಿಯುತ್ತಿರುವುದರಿಂದ ಈಗಾಗಲೇ ಶಿಥಿಲವಾಗಿರುವ/ದುರ್ಬಲವಾಗಿರುವ ಕೆಲವು ಶಾಲಾ ಕಟ್ಟಡಗಳು/ಕೊಠಡಿಗಳು ಬಿದ್ದುಹೋಗುವ ಹಾಗೂ ಅಪಾಯದ ಅಂಚಿಗೆ ತಲುಪುವ ಸಾಧ್ಯತೆಗಳು ಇರುತ್ತದೆ.

ಇಂತಹ ಶಾಲಾ ಕಟ್ಟಡಗಳಲ್ಲಿ/ಕೊಠಡಿಗಳಲ್ಲಿ ಅಥವಾ ಅವುಗಳ ಸನಿಹದಲ್ಲಿ ಶಾಲೆ ನಡೆಯುತ್ತಿದ್ದು, ಅವುಗಳು ಬಿದ್ದುಹೋದಲ್ಲಿ, ಅಲ್ಲಿರುವ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳು ಪ್ರಾಣಾಪಾಯಕ್ಕೆ ಸಿಲುಕುವ ಸಂಭವವಿರುತ್ತದೆ.

ಈ ಹಿನ್ನಲೆಯಲ್ಲಿ ಇಂದೇ ಎಲ್ಲಾ ಉಪ ನಿರ್ದೇಶಕರು, ಡಯಟ್ ಪ್ರಾಂಶುಪಾಲರುಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಖುದ್ದಾಗಿ ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಇಂತಹ ಅಪಾಯದ ಸ್ಥಿತಿಯಲ್ಲಿರುವ ಶಾಲಾ ಕಟ್ಟಡಗಳನ್ನು / ಕೊಠಡಿಗಳನ್ನು/ ಶೌಚಾಲಯಗಳನ್ನು/ ತಡೆಗೋಡೆಗಳನ್ನು/ ಆಕೃತಿಗಳನ್ನು/ಶಾಲಾ ಕಟ್ಟಡಗಳನ್ನು ಮತ್ತು ಶಾಲಾ ಕಟ್ಟಡಗಳ ಬಳಿ ಮಳೆಯಿಂದ ವಿದ್ಯುತ್ ತಂತಿಗಳು ಬಿದ್ದಿದ್ದಲ್ಲಿ, ಗುಂಡಿ ಇದ್ದಲ್ಲಿ ಅಂತಹವುಗಳನ್ನು ತಕ್ಷಣ ಗುರುತಿಸುವುದು.

ಇಂತಹ ಸನ್ನಿವೇಶಗಳಲ್ಲಿ ಶಾಲೆ ನಡೆಯುತ್ತಿದ್ದಲ್ಲಿ ಕೂಡಲೆ ಅಲ್ಲಿಂದ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳನ್ನು ತೆರವುಗೊಳಿಸಿ ಶಾಲೆ ನಡೆಸಲು ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಿಕೊಳ್ಳಲು ಹಾಗೂ ಯಾವುದೇ ಕಾರಣಕ್ಕೂ ಯಾರೂ ಸಹ ಇಂತಹವುಗಳ ಸಂಪರ್ಕಕ್ಕೆ ಬಾರದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಎಲ್ಲಾ ಶಾಲಾ ಮುಖ್ಯಸ್ಥರಿಗೆ, ಎಸ್.ಡಿ.ಎಂ.ಸಿಗಳಿಗೆ ಮತ್ತು ಆಡಳಿತ ಮಂಡಳಿಗಳಿಗೆ ತಿಳಿಸಿದೆ. ಈ ಸಂಬಂಧ ತಕ್ಷಣ ಮೇಲ್ವಿಚಾರಣೆಯನ್ನು ಕೈಗೊಂಡು ಸೂಕ್ತ ಮಾರ್ಗದರ್ಶನವನ್ನು ನೀಡುವಂತೆ ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಈ ಮೂಲಕ ತಿಳಿಸಿದೆ.

ಮುಂದುವರೆದು, ಸಿ.ಆರ್.ಪಿ ಮತ್ತು ಬಿ.ಆರ್.ಪಿಗಳ ಮೂಲಕ ಇಂತಹ ಶಾಲಾ ಕಟ್ಟಡಗಳ ಸಮೀಕ್ಷೆ ನಡೆಸಿ ಅವುಗಳ ದುರಸ್ಥಿಗಾಗಿ ರಾಜ್ಯ/ಜಿಲ್ಲಾ ವಿಪತ್ತು ನಿರ್ವಹಣಾ ನಿಧಿಯಡಿ ಹಾಗೂ

ಇತರೇ ಲಭ್ಯವಿರುವ ಅನುದಾನ(ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ,ಡಿ.ಎಂ.ಎಫ್ ಯೋಜನೆಯಡಿ, ಜಿಲ್ಲಾ ಪಂಚಾಯತ್ ಸೇರ್ಪಡೆ ಹಾಗೂ ಮಾರ್ಪಾಡು ಯೋಜನೆಯಡಿ)ಬಿಡುಗಡೆ ಮಾಡಲು ಆಯಾ ಜಿಲ್ಲಾಧಿಕಾರಿಗಳಿಗೆ ಮತ್ತು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕರಿಗಳಿಗೆ ಪ್ರಸ್ತಾವನೆ ಸಲ್ಲಿಸಿ ಅನುದಾನ ಬಿಡುಗಡೆ ಮಾಡಿಸಿಕೊಂಡು ಸದರಿ ಶಾಲಾ ಕಟ್ಟಡಗಳ ದುರಸ್ಥಿಯನ್ನು ತಕ್ಷಣ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಈ ಮೂಲಕ ತಿಳಿಸಿದೆ.

ಒಂದು ವೇಳೆ ಇಂತಹ ಪ್ರಕರಣಗಳಲ್ಲಿ ಅಗತ್ಯ ಮುನ್ನೆಚ್ಚರಿಕೆಗಳನ್ನು ವಹಿಸದೇ ಯಾವುದೇ ಅವಗಡ/ಪ್ರಾಣಾಪಾಯ/ಪ್ರಾಣ ಹಾನಿ ಉಂಟಾದಲ್ಲಿ ಅದಕ್ಕೆ ಸಂಬಂಧಿಸಿದ ಶಾಲಾ ಮುಖ್ಯಸ್ಥರು, ಸಿ.ಆರ್.ಪಿ.,ಬಿ.ಆರ್.ಪಿ.,ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆಡಳಿತ) ರವರನ್ನೇ ನೇರ ಹೊಣೆಗಾರರನ್ನಾಗಿಸಲಾಗುವುದು. ಪ್ರಯುಕ್ತ ಸೂಕ್ತ ಎಚ್ಚರಿಕೆ ವಹಿಸಲು ಈ ಮೂಲಕ ಸೂಚಿಸಿದೆ.(ಈ ಪತ್ರದೊಂದಿಗೆ ಲಗತ್ತಿಸಿರುವ ಅನುಬಂಧ-1 ರಲ್ಲಿನ ಮಾಹಿತಿಯನ್ನು ಈ ಪತ್ರ ತಲುಪಿದ 02 ದಿನಗಳ ಒಳಗಾಗಿ ಸಲ್ಲಿಸಲು ತಿಳಿಸಿದೆ)

R. 19/11/2021.

ಡಾ॥ವಿಶಾಲ್ .ಆರ್., ಭಾ.ಆ.ಸೇ.
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರಿಗೆ ಮುಂದಿನ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ [ ಆಯಾ ಉಪನಿರ್ದೇಶಕರು(ಆಡಳಿತ)ರವರ ಮೂಲಕ] ಮುಂದಿನ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸಿ.ಆರ್.ಪಿ., ಬಿ.ಆರ್.ಪಿ., ಮತ್ತು ಶಾಲಾ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ) ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು ಮಾಹಿತಿಗಾಗಿ,

01. ಸರ್ಕಾರದ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
02. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ.
03. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
04. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
05. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
06. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ(ಆಯಾ ಉಪನಿರ್ದೇಶಕರು(ಆಡಳಿತ)ರವರ ಮೂಲಕ] ಕಳುಹಿಸುತ್ತಾ ಇಂತಹ ಶಾಲೆಗಳ ದುರಸ್ಥಿಗಾಗಿ ಕೂಡಲೆ ಅನುದಾನ ಬಿಡುಗಡೆ ಮಾಡಲು ಕೋರಿದೆ.
07. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ(ಆಯಾ ಉಪನಿರ್ದೇಶಕರು(ಆಡಳಿತ)ರವರ ಮೂಲಕ] ಕಳುಹಿಸುತ್ತಾ ಇಂತಹ ಶಾಲೆಗಳ ದುರಸ್ಥಿಗಾಗಿ ಕೂಡಲೆ ಅನುದಾನ ಬಿಡುಗಡೆ ಮಾಡಲು ಕೋರಿದೆ.
08. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಾಹಾರ ಯೋಜನೆ, ಕೆ.ಜಿ. ರಸ್ತೆ, ಬೆಂಗಳೂರು.
09. ಕಛೇರಿ ಪ್ರತಿ.

## ಅನುಬಂಧ-1

**2021-22 ನೇ ಸಾಲಿನಲ್ಲಿ ಮಳೆಯಿಂದ ಹಾನಿಗೊಳಗಾದ ಸರ್ಕಾರಿ ಶಾಲೆಗಳಲ್ಲಿ ಬದಲಿ ವ್ಯವಸ್ಥೆ ಕಲ್ಪಿಸಿರುವ ಬಗ್ಗೆ ಜಿಲ್ಲಾ ಮತ್ತು ತಾಲ್ಲೂಕು ವಿವರ**

| ಕ್ರ.ಸಂ | ಜಿಲ್ಲೆಯ ಹೆಸರು | ತಾಲ್ಲೂಕಿನ ಹೆಸರು | ಮಳೆಯಿಂದ ಹಾನಿಗೊಳಗಾದ ಶಾಲೆಯ ಹೆಸರು ಮತ್ತು ವಿಳಾಸ | ಡೈಸ್ ಸಂಖ್ಯೆ | ಮಕ್ಕಳ ಸಂಖ್ಯೆ | ಹಾನಿಗೊಳಗಾದ ಕೊಠಡಿಗಳ ಸಂಖ್ಯೆ | ಬದಲಿ ವ್ಯವಸ್ಥೆ ಕಲ್ಪಿಸಿರುವ ಬಗ್ಗೆ ವಿವರ | ಷರಾ. |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| | | | | | | | | |
| | | | | | | | | |
| | | | | | | | | |
| | | | | | | | | |
| | | | | | | | | |
| | | | | | | | | |
| ಒಟ್ಟು | | | | | | | | |

ಸಹಿ

ಉಪ ನಿರ್ದೇಶಕರು(ಆಡಳಿತ)

__________________ಜಿಲ್ಲೆ